## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಕೃಷ್ಣಮೂರ್ತಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ರಾಣಿಬೆನ್ನೂರು ಇವರ ವಿರುದ್ಧದ ಶಿಸ್ತುಕ್ರಮ-ಅಂತಿಮ ದಂಡನಾದೇಶ.

ಓದಲಾಗಿದೆ:- 1. ಮಾನ್ಯ ಲೋಕಾಯುಕ್ತರು ಇವರ ವರದಿ ಸಂಖ್ಯೆ: ಕಂಪ್ಲೇಂಟ್/ಲೋಕ/ಬಿಜಿಎಮ್/2183/2014/ಎಆರ್‌ಇ-02, ದಿ:09.10.2014.
2. ಅಪರ ನಿಬಂಧಕರು, ವಿಚಾರಣೆಗಳು-2, ಕರ್ನಾಟಕ ಲೋಕಾಯುಕ್ತ ಇವರ ಪತ್ರ ಸಂಖ್ಯೆ:ಕಂಪ್ಲೇಂಟ್/ಲೋಕ/ಬಿಜಿಎಮ್/2183/2014/ಎಆರ್‌ಇ-02, ದಿ:14.10.2014.
3. ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿ: 01.12.2014.
4. ಅಧಿಕಾರಿಯ ಲಿಖಿತ ರಕ್ಷಣಾ ಹೇಳಿಕೆ ದಿನಾಂಕ: 26.12.2014
5. ಹಾವೇರಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಇವರ ಪತ್ರ ಸಂಖ್ಯೆ:ಹಾಜಿಪಂ/ಆಡಳಿತ-2/ಇವಿ/ವಹಿ-04/2014-15/2176 ದಿ:20.10.2015.

********

**ಪ್ರಸ್ತಾವನೆ:-**

ಹಾವೇರಿ ಜಿಲ್ಲೆಯ ರಾಣಿಬೆನ್ನೂರು ತಾಲ್ಲೂಕಿನ ಕಾಕೋಳು ಗ್ರಾಮ ಪಂಚಾಯತಿಯ ಹಿಂದಿನ ಅಧ್ಯಕ್ಷರಾಗಿದ್ದ, ಶ್ರೀ ವೀರಪ್ಪ ಮಾರ್ತಾಂಡಪ್ಪ ಆಡಿನವರ್, ಇವರು ಅಕ್ರಮವಾಗಿ ರೂ.2,50,901-00 ಹಾಗೂ ಶ್ರೀ ಗುಂಡಪ್ಪ ಹರೋಗಪ್ಪ, ಇವರು ರೂ. 3,70,000/-ಗಳನ್ನು ಅನಧಿಕೃತವಾಗಿ ಡ್ರಾ ಮಾಡಿ ವೆಚ್ಚಮಾಡಿದ್ದು, ಸದರಿ ಮೊತ್ತವನ್ನು ಸಂಬಂಧಪಟ್ಟವರಿಂದ ಶೇ.15ರಷ್ಟು ವಾರ್ಷಿಕ ಬಡ್ಡಿಯೊಂದಿಗೆ ವಸೂಲು ಮಾಡುವಂತೆ, ಆಡಿಟ್ ಅಧಿಕಾರಿಗಳು ದಿನಾಂಕ:05.12.2012ರ ವರದಿಯಲ್ಲಿ ಶಿಫಾರಸ್ಸು ಮಾಡಿದ್ದರೂ, ಹಾವೇರಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ರಾಣೆಬೆನ್ನೂರು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಬ್ಯಾಡಗಿ ವಿಧಾನಸಭಾ ಕ್ಷೇತ್ರದ ಶಾಸಕರು ಯಾವುದೇ ಕ್ರಮಕೈಗೊಂಡಿರುವುದಿಲ್ಲವೆಂದು ಶ್ರೀ ರಾಜಶೇಖರೇಗೌಡ, ಕಾಕೋಳು ಗ್ರಾಮ ಪಂಚಾಯತಿ ಸದಸ್ಯರು, ಇವರು ದಿನಾಂಕ: 11.07.2014ರಂದು ಮಾನ್ಯ ಲೋಕಾಯುಕ್ತಕ್ಕೆ ನೀಡಿದ್ದ ದೂರಿನ ಬಗ್ಗೆ ವಿಚಾರಣೆಯನ್ನು ಕೈಗೊಂಡು, ಮಾನ್ಯ ಲೋಕಾಯುಕ್ತರು ಮೇಲೆ-(1)ರಲ್ಲಿ ಓದಲಾದ ವರದಿಯಲ್ಲಿ, ಸದರಿ ಮೊತ್ತವನ್ನು ಸಂಬಂಧಪಟ್ಟವರಿಂದ ವಸೂಲು ಮಾಡಲು ವಿಫಲರಾಗಿರುವುದರಿಂದ, ಹಾವೇರಿ ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯ ವಿರುದ್ಧ ಸೂಕ್ತ ಕ್ರಮವನ್ನು ಕೈಗೊಳ್ಳುವಂತೆ, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರನ್ವಯ ಶಿಫಾರಸ್ಸನ್ನು ಮಾಡಿದ್ದು, ಸದರಿ ವರದಿಯನ್ನು ಕಳುಹಿಸಿ ಕೊಡುತ್ತಾ, ಮಾನ್ಯ ಲೋಕಾಯುಕ್ತರ ಶಿಫಾರಸ್ಸಿನಂತೆ, ಅಗತ್ಯ ಕ್ರಮವನ್ನು ಕೈಗೊಳ್ಳುವಂತೆ, ಮೇಲೆ-(2)ರಲ್ಲಿ ಓದಲಾದ ಪತ್ರದಲ್ಲಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಯ ಅಪರ ನಿಬಂಧಕರು ವಿಚಾರಣೆ-2 ರವರು ಕೋರಿರುತ್ತಾರೆ.

ಮಾನ್ಯ ಲೋಕಾಯುಕ್ತರ ಶಿಫಾರಸ್ಸನ್ನಾಧರಿಸಿ, ರಾಣೆಬೆನ್ನೂರು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಕೃಷ್ಣಮೂರ್ತಿ, ಇವರಿಗೆ ಮೇಲೆ-(3)ರಲ್ಲಿ ಓದಲಾದಂತೆ, ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ-12ರನ್ವಯ ದಿನಾಂಕ: 01.12.2014ರಂದು ದೋಷಾರೋಪಣ ಪಟ್ಟಿಯೊಂದಿಗೆ ಕಾರಣ ಕೇಳುವ

ನೋಟಿಸನ್ನು ಜಾರಿಗೊಳಿಸಲಾಗಿರುತ್ತದೆ. ಸದರಿ ನೋಟಿಸಿಗೆ ಮೇಲೆ-(4)ರಲ್ಲಿ ಓದಲಾದಂತೆ, ನೀಡಿರುವ ಉತ್ತರದಲ್ಲಿ ತಾವು ದಿನಾಂಕ: 31.08.2013ರಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ರಾಣೆಬೆನ್ನೂರು ಹುದ್ದೆಯ ಪ್ರಭಾರವನ್ನು ವಹಿಸಿಕೊಂಡಿದ್ದು, ಘಟನೆಯು 2009-10 ಮತ್ತು 2010-11ನೇ ಸಾಲುಗಳಿಗೆ ಸಂಬಂಧಿಸಿದಿರುವುದಾಗಿಯೂ ಹಾಗೂ ವಸೂಲಾತಿಯ ಆದೇಶವನ್ನು ದಿನಾಂಕ: 05.12.2012 ರಂದು ಹೊರಡಿಸಿದ್ದು, ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಹಾವೇರಿ, ಇವರಿಗೆ ಸಲ್ಲಿಸಿದ್ದ ಮನವಿಯಲ್ಲಿ ಅಂತಿಮ ಆದೇಶವನ್ನು ದಿನಾಂಕ: 13.06.2014ರಂದು ಹೊರಡಿಸಿದ್ದನ್ವಯ, ಈ ಪ್ರಕರಣದಲ್ಲಿ ಮುಂದಿನ ವಿಚಾರಣೆಯನ್ನು ಕೈಗೆತ್ತಿಕೊಂಡಿದ್ದು, ಆದರೆ, ಅನಾರೋಗ್ಯದ ನಿಮಿತ್ತ ವಿಚಾರಣೆಯನ್ನು ಅಂತಿಮಗೊಳಿಸಲು ಸಾಧ್ಯವಾಗಲಿಲ್ಲವೆಂದು ತಿಳಿಸುತ್ತಾ, ತಮ್ಮ ಅನಾರೋಗ್ಯದ ರಜೆಯ ಅವಧಿಯಲ್ಲಿ ಪ್ರಭಾರಿ ಕಾರ್ಯನಿರ್ವಾಹಕ ಅಧಿಕಾರಿರವರು ವಿಚಾರಣೆಯನ್ನು ಮುಂದುವರೆಸಿ ಅಂತಿಮ ಆದೇಶವನ್ನು ದಿನಾಂಕ: 04.12.2014ರಂದು ಹೊರಡಿಸಿರುತ್ತಾರೆಂದು ತಿಳಿಸುತ್ತಾ, ತಮ್ಮ ವಿರುದ್ದದ ಶಿಸ್ತು ಕ್ರಮವನ್ನು ಕೈಬಿಡುವಂತೆ ಕೋರಿರುತ್ತಾರೆ.

ಆರೋಪಿತ ಅಧಿಕಾರಿಯು ನೀಡಿದ್ದ ಲಿಖಿತ ರಕ್ಷಣಾ ಹೇಳಿಕೆಗೆ ಕಂಡಿಕೆವಾರು ಷರಾಗಳೊಂದಿಗೆ ಸ್ಪಷ್ಟ ಅಭಿಪ್ರಾಯವನ್ನು ನೀಡುವಂತೆ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಹಾವೇರಿ, ಇವರನ್ನು ಕೋರಲಾಗಿ, ಮೇಲೆ-(5)ರಲ್ಲಿ ಓದಲಾದ ಪತ್ರದಲ್ಲಿ ಕಾರ್ಯನಿರ್ವಾಹಕ ಅಧಿಕಾರಿರವರು ಕಾಕೋಳು ಗ್ರಾಮ ಪಂಚಾಯತಿಗೆ ಆಗಿದ್ದ ನಷ್ಟವನ್ನು ಸಂಬಂಧಪಟ್ಟವರಿಂದ, ವಸೂಲಿ ಮಾಡಲು, ನಿಗಧಿತ ಅವಧಿಯೊಳಗಾಗಿ ಕ್ರಮವಹಿಸದೇ, ವಿಫಲಾರಾಗಿರುತ್ತಾರೆಂದು, ಹಾಗೂ ಜಿಲ್ಲಾ ಪಂಚಾಯತ್ ಕಾರ್ಯಾಲಯದ ನಿರ್ದೇಶನಗಳನುಸಾರ ಕಾಲಮಿತಿಯಲ್ಲಿ ಕ್ರಮವಹಿಸಲು ಜಾಗ್ರತೆ ವಹಿಸಿರುವುದಿಲ್ಲವೆಂದು ಅಭಿಪ್ರಾಯ ಪಟ್ಟಿರುತ್ತಾರೆ.

ಶ್ರೀ ಕೃಷ್ಣಮೂರ್ತಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ರಾಣೆಬೆನ್ನೂರು, ಇವರು ನೀಡಿರುವ ಲಿಖಿತ ರಕ್ಷಣಾ ಹೇಳಿಕೆ, ಇನ್ನಿತರೆ ಸಂಬಂಧಪಟ್ಟ ದಾಖಲಾತಿಗಳನ್ನು ಹಾಗೂ ಹಾವೇರಿ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರ ಅಭಿಪ್ರಾಯವನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದೆ. ಆಡಿಟ್ ಅಧಿಕಾರಿಗಳು ನೀಡಿದ್ದ ವರದಿಯಲ್ಲಿನ ಶಿಫಾರಸ್ಸಿನಂತೆ, ಕಾಕೋಳು ಗ್ರಾಮ ಪಂಚಾಯತಿಗೆ ಆಗಿದ್ದ ಆರ್ಥಿಕ ನಷ್ಟವನ್ನು ಕಾಲಮಿತಿಯೊಳಗೆ ವಸೂಲು ಮಾಡಲು ಅವಶ್ಯಕ ಕ್ರಮಗಳನ್ನು ಕೈಗೊಳ್ಳಲು ಅಧಿಕಾರಿಗಳು ವಿಫಲರಾಗಿರುವುದು ಕಂಡು ಬಂದಿರುವುದರಿಂದ, ಹಾಗೂ ಅಧಿಕಾರಿಯ ರಕ್ಷಣಾ ಹೇಳಿಕೆಯು, ಅವರ ವಿರುದ್ದದ ಆರೋಪಗಳನ್ನು ಕೈಬಿಡಲು ಸಕಾರಣ/ಸಮಂಜಸ/ ತೃಪ್ತಿಕರವಾಗಿಲ್ಲದೆ ಇರುವುದರಿಂದ, ಇವರ ಕರ್ತವ್ಯಲೋಪಕ್ಕೆ ಸಂವಾದಿಯಾಗಿ, ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 258 ಪಬವ 2015 ಬೆಂಗಳೂರು ದಿನಾಂಕ: 21.09.2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ನಿಯೋಜನೆ ಮೇರೆಗೆ ಈ ಹಿಂದೆ ರಾಣೆಬೆನ್ನೂರು ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಮೂಲತ: ಕೃಷಿ ಇಲಾಖೆಯ ಅಧಿಕಾರಿಯಾದ ಶ್ರೀ ಕೆ.ಕೃಷ್ಣಮೂರ್ತಿ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು-1957ರ ನಿಯಮ-

8(iii)ರನ್ವಯ, ಕಾಲಿಕ ವೇತನ ಶ್ರೇಣಿಯಲ್ಲಿ ಒಂದು ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ರಹಿತವಾಗಿ ತಡೆಹಿಡಿಯುವ ದಂಡನೆಯನ್ನು ಸರ್ಕಾರವು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

21/9/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:-

1. ಮಹಾಲೇಖಪಾಲರು(ಜಿ&ಎಸ್ಎಸ್ಎ)/(ಇ&ಆರ್ಎಸ್ಎ)/(ಎ&ಇ) ರವರ ಕಾರ್ಯದರ್ಶಿ, ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01
2. ಅಪರ ನಿಬಂಧಕರು, ವಿಚಾರಣೆಗಳು-2, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
5. ಸರ್ಕಾರ ಅಧೀನ ಕಾರ್ಯದರ್ಶಿ (ಸೇವೆಗಳು) ಕೃಷಿ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸಂಬಂಧಿಸಿದ ಅಧಿಕಾರಿಗೆ (ಕೃಷಿ ಇಲಾಖೆಯ ಮುಖಾಂತರ).

ಪ್ರತಿ ಮಾಹಿತಿಗಾಗಿ:-

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶೀ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಜಂಟಿ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.